**FEBRUARY 24, 2026**

**AKASHAVANI - DHARWAD**

**PRADESH SAAMACHARA (KANNADA) 12 PM**

<><><>

**2026–27ನೇ ಸಾಲಿನ ಕೇಂದ್ರ ಮುಂಗಡಪತ್ರ** ಕುರಿತು, ಬೆಂಗಳೂರಿನ ಪೀಣ್ಯ ಕೈಗಾರಿಕಾ ಸಂಘದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ, ಕೈಗಾರಿಕೋದ್ಯಮಿಗಳೊಂದಿಗೆ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ, ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಬಾರಿಯ ಆಯವ್ಯಯದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಉತ್ತೇಜನಕ್ಕೆ, ಹೆಚ್ಚಿನ ಅನುದಾನ ನೀಡಲಾಗಿದೆ. ಇದಕ್ಕಾಗಿ 10 ಸಾವಿರ ಕೋಟಿ ರೂಪಾಯಿ ನಿಧಿ ಮೀಸಲಿಡಲಾಗಿದೆ. ಇದರಿಂದ ಕೈಗಾರಿಕಾ ವಲಯದಲ್ಲಿ, ಹೆಚ್ಚಿನ ಉದ್ಯೋಗ ಸೃಷ್ಟಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

<><><>

**ನಾಡಿನ ಖ್ಯಾತ ರಂಗಕರ್ಮಿ** ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಪರ್ಫಾರ್ಮಿಂಗ್ ಆರ್ಟ್ಸ್ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊಫೆಸರ್ ಕೆ. ರಾಮಕೃಷ್ಣಯ್ಯ ಮೈಸೂರಿನ ಡಾಕ್ಟರ್ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿಗಳಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

<><><>

**ವಿಜಯನಗರ ಜಿಲ್ಲೆ, ಹಂಪಿ ಕನ್ನಡ ವಿಶ್ವವಿದ್ಯಾಲಯ** ಘಟಿಕೋತ್ಸವ, 34 ನೇ ನುಡಿ ಹಬ್ಬ, ಇಂದು ಸಂಜೆ 5.30 ಕ್ಕೆ, ವಿಶ್ವವಿದ್ಯಾಲಯದ ನವರಂಗ ಬಯಲು ರಂಗಮಂದಿರದಲ್ಲಿ ಜರುಗಲಿದೆ. ಹಂಪಿ ವಿಶ್ವವಿದ್ಯಾಲಯ ಕೊಡ ಮಾಡುವ ಪ್ರತಿಷ್ಠಿತ ನಾಡೋಜ ಗೌರವಕ್ಕೆ, ಭಾಜನರಾದ ಕನ್ನಡದ ಪ್ರಸಿದ್ಧ ಬರಹಗಾರ ಹಾಗೂ ಮಾರ್ಕ್ಸ್ ವಾದಿ ಚಿಂತಕ ಡಾಕ್ಟರ್ ಜಿ. ರಾಮಕೃ ್ಣ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಮನಸ್ಸನ್ನು ನಿಯಂತ್ರಿಸಲು** ಹಾಗೂ ಏಕಾಗ್ರತೆ ಸಾಧಿಸಲು ಸಂಗೀತ ಸಹಕಾರಿಯಾಗಿದೆ. ನಮ್ಮನ್ನು ಸದಾ ಕ್ರೀಯಾಶೀಲರನ್ನಾಗಿಸುವ ಅಗಾಧ ಶಕ್ತಿ ಸಂಗೀತಕ್ಕಿದೆ. ಆದ್ದರಿಂದ ಮಕ್ಕಳಿಗೆ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಪ್ರೋತ್ಸಾಹಿಸಬೇಕು ಎಂದು ಸ್ವರ ಸಾಮ್ರಾಟ ಪಂಡಿತ ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ ಟ್ರಸ್ಟ ಅಧ್ಯಕ್ಷ ಪಂಡಿತ ಕೈವಲ್ಯ ಕುಮಾರ ಗುರವ ಪೋಷಕರಲ್ಲಿ ಮನವಿ ಮಾಡಿದ್ದಾರೆ. ಧಾರವಾಡ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಛಯ ಸಭಾಂಗಣದಲ್ಲಿ ಧಾರವಾಡ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು, ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಹಕಾರದೊಂದಿಗೆ, ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ, ವಸತಿ ನಿಲಯದ ವಿದ್ಯಾರ್ಥಿನಿಯರಿಗೆ ಆಯೋಜಿಸಿದ್ದ ಸಂಗೀತ ಕಲಾ ತರಬೇತಿಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಎಂ.ಬಿ.ಸಣ್ಣೇರ ಮಾತನಾಡಿ, ಮನಸ್ಸಿಗೆ ಮುದ ನೀಡುವ ಮನರಂಜನಾ ಕಲೆಗಳಾದ ಸಂಗೀತ, ನೃತ್ಯ, ನಾಟಕದಂತಹ ಕಲೆಗಳನ್ನು ಕಲಿಯುವ ಮೂಲಕ ನಮ್ಮ ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಪಾಲಕರು ಸಹಕರಿಸಬೇಕು. ಮಕ್ಕಳಿಗೆ ಸಂಗೀತದ ಸಂಸ್ಕಾರವನ್ನು ನೀಡಲು ಸಹಕರಿಸಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯ ಶ್ಲಾಘನೀಯ ಎಂದರು. ಅಧ್ಯಕ್ಷತೆವಹಿಸಿ ಮಾತನಾಡಿದ ಚಿತ್ರಕಲಾ ಶಿಲ್ಪಿ ಶ್ರೀ ಡಿ.ವಿ.ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟನ ಅಧ್ಯಕ್ಷ ಬಿ.ಮಾರುತಿ, ಸಂಗಿತ ಆತ್ಮವಿಶ್ವಾಸ ಹಾಗೂ ಚೈತನ್ಯವನ್ನು ವೃದ್ಧಿಸುತ್ತದೆ. ಕಲೆಯು ನಮ್ಮನ್ನು ಮಾನಸಿಕ ಹಾಗೂ ಆರ್ಥಿಕವಾಗಿ ಸಧೃಢಗೊಳಿಸುತ್ತದೆ ಎಂದರು.

<><><>

**ಧಾರವಾಡದ ಕರ್ನಾಟಕ ಮಹಾವಿದ್ಯಾಲಯ** ಆವರಣದಲ್ಲಿ ಆಯೋಜಿಸಲಾಗಿದ್ದ, ಶ್ವಾನ ಪ್ರದರ್ಶನ –2026 ನ್ನು ಜಿಲ್ಲಾಧಿಕಾರಿ ಆರ್. ಸ್ನೇಹಲ್ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭುವನೇಶ ಪಾಟೀಲ್ ಜಂಟಿಯಾಗಿ ಉದ್ಘಾಟಿಸಿದರು. ಶ್ವಾನ ಪ್ರದರ್ಶನದಲ್ಲಿ ಒಟ್ಟು 29 ತಳಿಗಳ, 150 ನಾಯಿಗಳು ಭಾಗವಹಿಸಿದ್ದು, 32 ಬೀದಿ ಶ್ವಾನ ಮರಿಗಳನ್ನು ದತ್ತು ಪಡೆಯಲಾಯಿತು. ಶ್ವಾನ ಮರಿಗಳನ್ನು ಸಣ್ಣ, ಮಧ್ಯಮ, ದೊಡ್ಡ ಹಾಗೂ ಭಾರತೀಯ ತಳಿಗಳಾಗಿ ಒಟ್ಟು 4 ವಿಭಾಗಗಳಾಗಿ ವಿಂಗಡಿಸಿ, ಅವುಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವನ್ನು ನೀಡಲಾಯಿತು. ಪ್ರದರ್ಶನದಲ್ಲಿ ಸುನೀಲ ಪೂಜಾರಿ ಅವರ ಜರ್ಮನ ಶೆಪರ್ಡ ಶ್ವಾನವನ್ನು ಚಾಂಪಿಯನ್ನಾಗಿ ಆಯ್ಕೆ ಮಾಡಲಾಯಿತು.

<><><>

**ಹಾವೇರಿ ಜಿಲ್ಲೆಯಲ್ಲಿ ದರ ಕುಸಿತದಿಂದ** ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದ ರೈತರ ಮೆಕ್ಕೆಜೋಳವನ್ನು ಖರೀದಿಸಲು ರಾಜ್ಯ ಸರ್ಕಾರ ಜಾರಿಗೆ ತಂದಿರುವ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ರಾಜ್ಯದ ಜಿಲ್ಲೆಗಳ ಪೈಕಿ ಹಾವೇರಿಯಲ್ಲಿ, ಅತ್ಯಧಿಕ 51 ಸಾವಿರದ 292 ರೈತರು ಹೆಸರು ನೋಂದಣಿ ಮಾಡಿಕೊಂಡು, ಮೆಕ್ಕೆಜೋಳ ಮಾರಾಟ ಮಾಡಿ ಸರ್ಕಾರದ ಸಹಾಯಧನ ಪಡೆಯಲು ಅರ್ಹರಾಗಿದ್ದಾರೆ. ವಿಜಯನಗರ ಹಾಗೂ ಗದಗ ಜಿಲ್ಲೆಗಳು ನಂತರದ ಸ್ಥಾನದಲ್ಲಿವೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ.

<><><>

**ಹುಬ್ಬಳ್ಳಿ ರಾಜನಗರದ,** ಕರ್ನಾಟಕ ಕ್ರಿಕೆಟ್ ಅಸೋಸಿಯೇಶನ್– ಕೆ.ಎಸ್.ಸಿ.ಎ ಮೈದಾನದಲ್ಲಿ, ಕರ್ನಾಟಕ ಹಾಗೂ ಜಮ್ಮು ಕಾಶ್ಮೀರ ತಂಡಗಳ ಮಧ್ಯೆ ರಣಜಿ ಟ್ರೋಫಿ ಅಂತಿಮ ಪಂದ್ಯ ಆರಂಭಗೊಂಡಿದೆ. ಟಾಸ್ ಗೆದ್ದ, ಜಮ್ಮು ಕಾಶ್ಮೀರ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದು, ಇತ್ತೀಚಿನ ವರದಿ ಬಂದಾಗ 1 ವಿಕೆಟ್ ನಷ್ಟಕ್ಕೆ 95 ರನ್ ಗಳಿಸಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

<><><>